**ಕರ್ನಾಟಕ ಸರ್ಕಾರ**

ಸಂಖ್ಯೆ:ಸಕಇ 334 ಪಕವಿ 2017(ಭಾ)

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ,
ಬೆಂಗಳೂರು, ದಿನಾಂಕ:18-06-2018

**ಇವರಿಂದ:**

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ,
ಬೆಂಗಳೂರು.

**ಇವರಿಗೆ:**

1. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
2. ನಿರ್ದೇಶಕರು, ಪರಿಶಿಷ್ಟ ಪಂಗಡ ಕಲ್ಯಾಣ ಇಲಾಖೆ, ಬೆಂಗಳೂರು

ಮಾನ್ಯರೇ,

ವಿಷಯ:- ರಾಜ್ಯದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳನ್ನು ವಿದೇಶಿ ವ್ಯಾಸಂಗಕ್ಕೆ ಆಯ್ಕೆ ಮಾಡುವ ಬಗ್ಗೆ

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಸಕಇ 334 ಪಕವಿ 2017, ದಿನಾಂಕ:30-06-2017

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2018-19 ನೇ ಸಾಲಿಗೆ ರಾಜ್ಯದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳನ್ನು ವಿದೇಶಿ ಉನ್ನತ ವ್ಯಾಸಂಗಕ್ಕೆ ಆಯ್ಕೆ ಮಾಡುವ ಸಂಬಂಧ ಪ್ರಸ್ತುತ ಚಾಲ್ತಿಯಲ್ಲಿರುವ ಮಾರ್ಗಸೂಚಿಗಳನ್ವಯ ಅರ್ಜಿಗಳನ್ನು ಆಹ್ವಾನಿಸಲು ಅಗತ್ಯ ಕ್ರಮ ಜರುಗಿಸುವಂತೆ ತಿಳಿಸಿದೆ.

ಮುಂದುವರೆದು, ಈ ಕಾರ್ಯಕ್ರಮದ ಮಾರ್ಗಸೂಚಿಗಳ ಬಗ್ಗೆ ಸರ್ಕಾರದ ಹಂತದಲ್ಲಿ ಪರಿಷ್ಕರಣೆ ಮಾಡುತ್ತಿರುವುದರಿಂದ, ಹಾಲಿ ಚಾಲ್ತಿಯಲ್ಲಿರುವ ಮಾರ್ಗಸೂಚಿಯಲ್ಲಿರುವ ವಿದೇಶಿ ವಿಶ್ವವಿದ್ಯಾಲಯಗಳ 200 ರ್‍ಯಾಂಕ್‌ಗಳ ಪ್ರಕಟಣೆಯನ್ನು ಜಾಹಿರಾತಿನಲ್ಲಿ ಸೇರಿಸುವುದು ಬೇಕಾಗಿಲ್ಲ.

ತಮ್ಮ ನಂಬುಗೆಯ,

(ಶಂಭುಲಿಂಗಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ.

18/6

ಪ್ರತಿ ಮಾಹಿತಿಗಾಗಿ:- ಮುಖ್ಯ ಆಡಳಿತಾಧಿಕಾರಿ, ಪರೀಕ್ಷಾ ಪೂರ್ವ ತರಬೇತಿ ಕೇಂದ್ರ, ಡಾ॥ಬಿ.ಆರ್.ಅಂಬೇಡ್ಕರ್ ಭವನ, ವಸಂತನಗರ, ಬೆಂಗಳೂರು

Scanned by CamScanner